ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

ವಾರ್ಡ್ ನಂ.71 : ಹೆಗ್ಗನಹಳ್ಳಿ

ದಿನಾಂಕ: 07.11.2020 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಡಾ॥ ರವಿಕುಮಾರ್ ಬಿ.ಆರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:

ಸಭೆಯಲ್ಲಿ ಹಾಜರಿದ್ದವರು:

ಕ್ರ.ಸಂ	ಹೆಸರು	ಪದನಾಮ
1	ಶ್ರೀ ಬಿ.ಆರ್ ರವಿಕುಮಾರ್	ನೋಡಲ್ ಅಧಿಕಾರಿ–ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ)
2	ಶ್ರೀ ಮಂಜುನಾಥ್ ಡಿ ಎಸ್	ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71
3	ಶಿವಲಿಂಗಯ್ಯ.ಕೆ	ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71
4	ಅನಂತ್ ಕುಮಾರ್	ಸಹಾಯಕ ಅಭಿಯಂತರರು–ಬೆಸ್ಕಾಂ
5	ಚೇತನ್	ಗುತ್ತಿಗೆದಾರರು– ಬೀದಿದೀಪ
6	ಸುರೇಶ್ ಎಂ	ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71
7	ಚಿಕ್ಕಣ್ಣ ಮೂರ್ತಿ	ಅರಣ್ಯ ಇಲಾಖೆ
8	ಶ್ರೀನಿವಾಸ್ ವಿ	ಬಿ.ಡಬ್ಲ್ಯೂ.ಎಸ್.ಎಸ್.ಬಿ
9	ವೆಂಕಟರಾಜು	ಸ್ಥಳೀಯ ನಾಗರೀಕರ ಕಲ್ಯಾಣ ಸಂಘ (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ)
10	ಲೋಕೇಶ್ ಗೌಡ	ಸ್ಥಳೀಯ ನಾಗರೀಕರ ಕಲ್ಯಾಣ ಸಂಘ
11	ರಂಗನಾಥ್	ಸ್ಥಳೀಯ ನಾಗರೀಕರ ಕಲ್ಯಾಣ ಸಂಘ
12	ಸ್ಯಾಮ್ಯುವೆಲ್ ಎ	ತೋಟಗಾರಿಕೆ

: ಚರ್ಚೆಯಾದ ವಿಷಯಗಳು :

1. ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆ ಗುಂಡಿಗಳನ್ನು ಮುಚ್ಚುತ್ತಿರುವ ಬಗ್ಗೆ
2. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ರ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ
3. ನೋಡಲ್ ಅಧಿಕಾರಿ ರವರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

:ನಡಾವಳಿಯ ವರದಿ:

- ಕಾರ್ಯದರ್ಶಿಗಳಾದ ಶ್ರೀ ಮಂಜುನಾಥ್ ಡಿ ಎಸ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿ-ವಾರ್ಡ್ ನಂ.71, ರವರು ಸಭೆಯಲ್ಲಿದ್ದವರನ್ನು ಪರಸ್ಪರ ಪರಿಚಯಿಸಿಕೊಂಡ ನಂತರ ಮಾತಾನಾಡಿ, ವಾರ್ಡ್ 71ರ ಅಭಿವೃದ್ಧಿಗೆ ಸಹಕರಿಸಲು ಎಲ್ಲರೂ ಒಗ್ಗಟ್ಟಾಗಿ ಕೈಜೋಡಿಸಲು ಕೋರಿದರು.

- ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿ-ವಾರ್ಡ್ ನಂ.71, ರವರು ಕೋವಿಡ್-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ಬಗ್ಗೆ ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಿನ ಪರೀಕ್ಷೆ ನಡೆಸಲು ಸೂಚಿಸಿದರು ಹಾಗೂ ಮಾಸ್ಕ್ ಧರಿಸುವ ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಧ್ವನಿವರ್ಧಕಗಳಲ್ಲಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಸೂಚಿಸಿದರು.

    - ಇದಕ್ಕೆ ಪ್ರತಿಕ್ರಿಯಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ಸುರೇಶ್ ಮಾತನಾಡಿ, ದಿನಕ್ಕೆ ಸರಾಸರಿ 200 ಜನರನ್ನು ಪರೀಕ್ಷೆಗೊಳಪಡಿಸುತ್ತಿದ್ದು, 4-5 ವ್ಯಕ್ತಿಗಳಲ್ಲಿ ಪಾಸಿಟಿವ್ ಪ್ರಕರಣಗಳು ಕಂಡುಬರುತ್ತಿದ್ದು, ಪಾಸಿಟಿವ್ ಪ್ರಕರಣಗಳಲ್ಲಿ ಗಣನೀಯವಾದ ಇಳಿಕೆ ಕಂಡುಬಂದಿರುತ್ತದೆ. ಇಳಿಕೆಯಾಗುತ್ತಿದೆ ಎಂದು ಉದಾಸೀನ ಮಾಡದೇ ವಾರ್ಡಿನ ಮುಖ್ಯಪ್ರದೇಶಗಳಲ್ಲಿ ಮಾರ್ಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ. ಮಾಸ್ಕ್ ಧರಿಸಲು ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಸಾರ್ವಜನಿಕರಲ್ಲಿ ಮನವೊಲಿಸುವ ಕಾರ್ಯವನ್ನು ಸಹ ಮಾಡಲಾಗುತ್ತಿದೆ ಎಂದು ತಿಳಿಸಿದರು.

- ಶ್ರೀ ವೆಂಕಟರಾಜು, ಆದ್ಯಕ್ಷರು, (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) ರವರು ಹೊಯ್ಸಳನಗರದಲ್ಲಿ ಕೆಲವು ಡಾಂಬರೀಕರಣವನ್ನು ಮಾಡಿರುವುದಿಲ್ಲ. ಇದರಿಂದ ವಾಹನ ಸವಾರರಿಗೆ ತುಂಬಾ ತೊಂದರೆಯಾಗುತ್ತಿದೆ. ಈ ಬಗ್ಗೆ ಕ್ರಮ ವಹಿಸಲು ಕೋರಿದರು.

    - ಇದಕ್ಕೆ ಪ್ರತಿಕ್ರಿಯಿಸಿದ ಸಹಾಯಕ ಅಭಿಯಂತರರಾದ ಶ್ರೀ ಮಂಜುನಾಥ್ ಡಿ ಎಸ್ ರವರು ಮಾತನಾಡಿ ಈಗಾಗಲೇ ವಾರ್ಡ್ ಅನುದಾನದಲ್ಲಿ ಹೊಯ್ಸಳನಗರದಲ್ಲಿ ಡಾಂಬರೀಕರಣ ಕಾಮಗಾರಿಯನ್ನು ಕೈಗೊಳ್ಳಲು ಟೆಂಡರ್ ಕರೆಯಲಾಗಿದೆ. ಕಡತವು ಟೆಂಡರ್ ಪ್ರಕ್ರಿಯೆಯಲ್ಲಿದ್ದು, ಶೀಘ್ರವೇ ಕಾರ್ಯಾದೇಶ ಪಡೆದು ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದೆಂದು ತಿಳಿಸಿದರು.

- ಶ್ರೀ ವೆಂಕಟರಾಜು, ಆದ್ಯಕ್ಷರು, (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) ರವರು ಹೊಯ್ಸಳನಗರದ ನಾಲ್ಕು ಕಡೆಗಳಲ್ಲಿ ಬೀದಿದೀಪಗಳು ಉರಿಯುತ್ತಿರುವುದಿಲ್ಲ. ಇವುಗಳನ್ನು ದುರಸ್ತಿಪಡಿಸಲು ಕೋರಿದರು.

    - ಇದಕ್ಕೆ ಪ್ರತಿಕ್ರಿಯಿಸಿದ ಬೀದಿದೀಪಗಳ ನಿರ್ವಹಣೆಯ ಗುತ್ತಿಗೆದಾರರರಾದ ಶ್ರೀ ಚೇತನ್, ರವರು ಸಭೆ ಮುಗಿದ ನಂತರ ತಮ್ಮನ್ನು ಭೇಟಿ ಮಾಡಿ, ಜಾಗಗಳನ್ನು ಪರಿಶೀಲಿಸಿ ದುರಸ್ತಿಪಡಿಸಲಾಗುವುದೆಂದು ತಿಳಿಸಿದರು.

- ಶ್ರೀ ರಂಗನಾಥ್ ರವರು ಮಾತನಾಡಿ ವಾರ್ಡಿನ ಹಲವಾರು ಕಡೆಗಳಲ್ಲಿ ಬೆಸ್ಕಾಂ ನವರು ಕೇಬಲ್ ಅಳವಡಿಸಲು ಗುಂಡಿಗಳನ್ನು ಅಗೆದಿದ್ದು, ಇನ್ನು ಮುಚ್ಚಿರುವುದಿಲ್ಲ ಈ ಬಗ್ಗೆ ಕ್ರಮವಹಿಸಲು ಕೋರಿದರು.

    - ಇದಕ್ಕೆ ಪ್ರತಿಕ್ರಿಯಿಸಿದ ಶ್ರೀ ಅನಂತ್ ಕುಮಾರ್ ರವರು (ಸಹಾಯಕ ಅಭಿಯಂತರರು-ಬೆಸ್ಕಾಂ) ಮಾತನಾಡಿ ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸಿ ಶೀಘ್ರದಲ್ಲಿಯೇ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

➢ ಶ್ರೀ ಲೋಕೇಶ್ ಗೌಡರವರು ಮಾತನಾಡಿ ಲಕ್ಷ್ಮಣ ನಗರದಲ್ಲಿ ಕಸದ ಆಟೋಗಳು ಸರಿಯಾಗಿ ಬರುತ್ತಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಲು ಕೋರಿದರು.

- ಇದಕ್ಕೆ ಪ್ರತಿಕ್ರಿಯಿಸಿದ ಶ್ರೀ ಸುರೇಶ್ ಎಂ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ಮಾತನಾಡಿ 01-11-2020ರಿಂದ ಆಟೋಗಳಿಗೆ ಜಿ.ಪಿ.ಎಸ್ ಅಳವಡಿಸಲಾಗಿದ್ದು, ಬಾರದಿದ್ದ ಪಕ್ಷದಲ್ಲಿ ನಮ್ಮ ಗಮನಕ್ಕೆ ತರಲು ಕೋರಿ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

➢ ಶ್ರೀ ರಂಗನಾಥ್ ರವರು ಮಾತನಾಡಿ ನೀಲಕಂಠೇಶ್ವರ ದೇವಸ್ಥಾನದ ರಸ್ತೆಯಲ್ಲಿ Cauvery Water Leakage ಆಗುತ್ತಿದ್ದು, ದುರಸ್ತಿಪಡಿಸಲು ಕೋರಿದರು.

- ಇದಕ್ಕೆ ಪ್ರತಿಕ್ರಿಯಿಸಿದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಶ್ರೀ ಶ್ರೀನಿವಾಸ್ ವಿ ರವರು ಮಾತನಾಡಿ ಸಭೆ ಮುಗಿದ ಬಳಿಕ ಪರಿಶೀಲಿಸಿ ಕ್ರಮ ವಹಿಸಲಾಗುವುದೆಂದು ತಿಳಿಸಿದರು.

➢ ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಮಂಜುನಾಥ್ ಡಿ ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ–ವಾರ್ಡ್ 71 ಹಾಗೂ
ಸಹಾಯಕ ಅಭಿಯಂತರರು,

(ಬಿ.ಆರ್.ರವಿಕುಮಾರ್)
ನೋಡಲ್ ಅಧಿಕಾರಿ ವಾರ್ಡ್–71

ಪ್ರತಿಯನ್ನು:

1) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ಪೋಲೀಸ್ ಸಬ್ ಇನ್ಸ್‌ಪೆಕ್ಟರ್ ರಾಜಗೋಪಾಲನಗರ ಪೋಲೀಸ್ ಠಾಣೆ ರವರ ಮಾಹಿತಿಗಾಗಿ
9) ಕಛೇರಿ ಕಡತಕ್ಕೆ